# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 145 ಮಭಾಬ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 26.02.2021.

## ಅಧಿಸೂಚನೆ

ಸರ್ಕಾರದ ಅಧಿಸೂಚನೆ-1 ರ ಸಂಖ್ಯೆ: ಮಮಇ 202 ಮಭಾಬ 2017, ದಿ:26.09.2017ರಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015 ಕಲಂ 27(1) (2) ಹಾಗೂ ಬಾಲ ನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕೇಂದ್ರ ಸರ್ಕಾರದ ಮಾದರಿ ನಿಯಮಗಳು, 2016ರ ನಿಯಮ 15 ರನ್ವಯ ಒಟ್ಟು 29 ಜಿಲ್ಲೆಗಳ (ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊರತುಪಡಿಸಿ) ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಮೂರು ವರ್ಷಗಳ ಅವಧಿಗೆ ನೇಮಕಾತಿ ಮಾಡಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಮಮಇ 202 ಮಭಾಬ 2017 (ಭಾ-1), ದಿ:30.11.2017ರಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮಕ್ಕಳ ಕಲ್ಯಾಣ ಸಮಿತಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಬಾಲ ನ್ಯಾಯ ಮಂಡಳಿಯ ಸಮಾಜ ಕಾರ್ಯಕರ್ತ ಸದಸ್ಯರನ್ನು ಹಾಗೂ ರಾಮನಗರ ಜಿಲ್ಲೆ ಬಾಲ ನ್ಯಾಯ ಮಂಡಳಿಗೆ ಮಹಿಳಾ ಸಮಾಜ ಕಾರ್ಯಕರ್ತ ಸದಸ್ಯರನ್ನು ಮೂರು ವರ್ಷಗಳ ಅವಧಿಗೆ ನೇಮಕಾತಿ ಮಾಡಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:ಮಮಇ 145 ಮಭಾಬ 2020, ದಿ:24.09.2020ರಂದು ಹೊರಡಿಸಿರುವ ಆದೇಶದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲನ್ಯಾಯ ಮಂಡಳಿಗೆ ಆಯ್ಕೆಯಾದ ಸದಸ್ಯರ ಅವಧಿಯು ಅನುಕ್ರಮವಾಗಿ ದಿನಾಂಕ:25.09.2020 ಹಾಗೂ ದಿನಾಂಕ: 29.11.2020ರಿಂದ 3 ತಿಂಗಳವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:ಮಮಇ 145 ಮಭಾಬ 2020, ದಿ:28.12.2020ರಂದು ಹೊರಡಿಸಿರುವ ಆದೇಶದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲನ್ಯಾಯ ಮಂಡಳಿಗೆ ಆಯ್ಕೆಯಾದ ಸದಸ್ಯರ ಅವಧಿಯು ಅನುಕ್ರಮವಾಗಿ ಫೆಬ್ರುವರಿ 2021ರ ತಿಂಗಳವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲ ನ್ಯಾಯ ಮಂಡಳಿಗಳಿಗೆ ಸದಸ್ಯರನ್ನು ಆಯ್ಕೆ ಮಾಡಲು ರಚಿತವಾಗಿರುವ **ರಾಜ್ಯ ಮಟ್ಟದ ಆಯ್ಕೆ ಸಮಿತಿಗೆ** ಸ್ವಯಂ ಸೇವಾ ಸಂಸ್ಥೆಗಳಿಂದ ಆಯ್ಕೆಯಾಗಿರುವ ಸದಸ್ಯರುಗಳ, ಆಯ್ಕೆಯ ಕ್ರಮ ಬದ್ಧತೆಯನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ:14848/2020 ದಾಖಲಿಸಲಾಗಿರುತ್ತದೆ.

ಈಗ, ವಿಸ್ತರಿಸಲಾದ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು, ಮತ್ತು ಸದಸ್ಯರ ಅವಧಿಯು ದಿನಾಂಕ:28.02.2021ಕ್ಕೆ ಕೊನೆಗೊಳ್ಳುತ್ತಿದ್ದು, ಪ್ರಸ್ತುತ ಇರುವ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ಬಾಲನ್ಯಾಯ ಮಂಡಳಿಯ ಸದಸ್ಯರ ಅವಧಿಯನ್ನು ಸದರಿ ರಿಟ್ ಪಿಟಿಷನ್ ಇತ್ಯರ್ಥವಾಗಿ, 2021-23ನೇ ಸಾಲಿನ ಸಮಿತಿ/ ಮಂಡಳಿಯನ್ನು ರಚಿಸಿ ಆದೇಶವಾಗುವರೆಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಪಿ. ಭಾಗ್ಯಲಕ್ಷ್ಮಿ 26/2/21
(ಪಿ.ಭಾಗ್ಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಇಲಾಖೆ (ಡಿ ಶಾಖೆ)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 200 ಪ್ರತಿಗಳನ್ನು ಒದಗಿಸುವುದು.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560 001.

2..

Scanned with CamScanner

2. ಗೌರವಾನ್ವಿತ ಶ್ರೀ ಜಸ್ಟೀಸ್ ಕೆ. ಎನ್. ಫಣೀಂದ್ರ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು, ಸಚಿವರ ವಸತಿ ನಿಲಯ, ಸಂಖ್ಯೆ:2, ಸ್ಯಾಂಕಿ ರಸ್ತೆ, ಬೆಂಗಳೂರು-560 052.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಕಾನೂನು ಇಲಾಖೆ, ವಿಧಾನ ಸೌಧ, ಬೆಂಗಳೂರು.
5. ಅಡ್ವೋಕೇಟ್ ಜನರಲ್, ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು.
6. ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಸಿದ್ದಪ್ಪ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು.
9. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
10. ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
11. ಎಲ್ಲಾ ಜಿಲ್ಲಾಧಿಕಾರಿಗಳಿಗೆ.
12. ಸಂಬಂಧಪಟ್ಟ ಮಕ್ಕಳ ಕಲ್ಯಾಣ ಸಮಿತಿಯ. ಅಧ್ಯಕ್ಷರು ಮತ್ತು ಸದಸ್ಯರು.
13. ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ.

(11–13) } ಐಸಿಪಿಎಸ್ ನಿರ್ದೇಶಕರ ಮುಖಂತಾರ.

14. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನ ಸೌಧ, ಬೆಂಗಳೂರು.
16. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**<u>ಪ್ರತಿ ಮಾಹಿತಿಗಾಗಿ;</u>**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ,ವಿಕಾಸ ಸೌಧ, ಬೆಂಗಳೂರು.

Scanned with CamScanner